ವರ್ಷ	ಮೊತ್ತ ರೂ.
2007–08	7.66,000–00
2008–09	8,06,300–00
2009–10	8,48,400–00

ಆ) ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆ

201 (408) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡುವುದಾಗಿ ಕಳೆದ ಅಧಿವೇಶನದಲ್ಲಿ ಸರ್ಕಾರ ಭರವಸೆ ನೀಡಿರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡದಿರಲು ಕಾರಣಗಳೇನು;

ಇ) ಸಿಂಧನೂರು ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆ ಇಲ್ಲದಿರುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಈಗಲಾದರೂ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯಲು ಕ್ರಮಕೈಗೊಳ್ಳುವುದೇ;

ಉ) ಹಾಗಿದ್ದಲ್ಲಿ, ಯಾವಾಗ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು.

ಆ) 1. ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 207 ಪಿಓಪಿ 2008, ದಿನಾಂಕ: 10/02/2010ರಲ್ಲಿ 2010–11ನೇ ಸಾಲಿನಲ್ಲಿ ಹೊಸ 7 ಪೊಲೀಸ್ ಠಾಣೆಗಳು, 8 ಸಂಚಾರಿ ಪೊಲೀಸ್ ಠಾಣೆಗಳು ಹಾಗೂ 10 ಪೊಲೀಸ್ ಉಪ ಠಾಣೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ. ಈ ಒಟ್ಟು 25 ಪೊಲೀಸ್ ಠಾಣೆಗಳಿಗೆ ತಗಲುವ ಆವರ್ತಕ ವೆಚ್ಚವು ರೂ. 16,49,49,128/–

ಆಗಿರುತ್ತದೆ. ಮುಂದುವರೆದು, ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 331 ಪಿಓಪಿ 2009, ದಿನಾಂಕ: 11/02/2010ರಲ್ಲಿ ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯಲ್ಲಿ ಪೊಲೀಸ್ ಉಪವಿಭಾಗವನ್ನು ಸಹ ತೆರೆಯಲಾಗಿದೆ. ಇದಕ್ಕಾಗಿ ತಗಲುವ ಆವರ್ತಕ ವೆಚ್ಚವು ರೂ. 13,03,956/- ಆಗಿರುತ್ತದೆ. ಈ ಪೊಲೀಸ್ ಠಾಣೆಗಳನ್ನು 2010-11ನೇ ಸಾಲಿನಿಂದ ಕಾರ್ಯಗತಗೊಳಿಸಲು ಮಂಜೂರಾತಿ ನೀಡಿದ್ದು, 25 ಪೊಲೀಸ್ ಠಾಣೆಗಳ ಮತ್ತು ಉಪವಿಭಾಗದ ಒಟ್ಟು ಆವರ್ತಕ ವೆಚ್ಚವು ರೂ. 16,62,53,084/-ಗಳಾಗುತ್ತವೆ. 2010-2011ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ "2055-00-800-0-01 ಹೊಸ ಆರಕ್ಷಕ ಠಾಣೆಗಳನ್ನು ತೆರೆಯುವುದು" ಇದರಡಿಯಲ್ಲಿ ರೂ. 406.69 ಲಕ್ಷಗಳ ಅನುದಾನವನ್ನು ಕಲ್ಪಿಸಲಾಗಿದೆ. 2010-11ನೇ ಸಾಲಿನಲ್ಲಿ ಮಂಜೂರಾತಿ ನೀಡಿದ ಪೊಲೀಸ್ ಠಾಣೆಗಳ ಆವರ್ತಕ ವೆಚ್ಚವನ್ನು ಭರಿಸಲು ಸದರಿ ಸಾಲಿನಲ್ಲಿ ಕಲ್ಪಿಸಿರುವ ಅನುದಾನವು ಕಡಿಮೆ ಆಗಿರುತ್ತದೆ.

2. ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈಗಾಗಲೇ ಮಂಜೂರಾತಿ ನೀಡಿದ 25 ಪೊಲೀಸ್ ಠಾಣೆಗಳು ಮತ್ತು ಒಂದು ಉಪ ವಿಭಾಗವು ಪೂರ್ಣವಾಗಿ ಕಾರ್ಯಾರಂಭಗೊಳ್ಳಲು ಕೊರತೆ ಬೀಳುವ ಅನುದಾನವನ್ನು ಸರಿದೂಗಿಸಿ ಅವುಗಳು ಕಾರ್ಯಾರಂಭ ಮಾಡಿದ ನಂತರ ಸಿಂಧನೂರು ನಗರಕ್ಕೆ ಹೊಸ ಪೊಲೀಸ್ ಠಾಣೆಯನ್ನು ಸೃಜಿಸುವ ಬಗ್ಗೆ ಹಣಕಾಸಿನ ಲಭ್ಯತೆಯ ಆಧಾರದ ಮೇಲೆ ಮಂಜೂರು ಮಾಡಲು ಪರಿಶೀಲಿಸಲಾಗುವುದು.

ಇ) ಬಂದಿದೆ.

ಈ) ಮತ್ತು ಉ) ಮೇಲಿನ "ಆ" ಪ್ರಶ್ನೆಗೆ ಕ್ರಮ ಸಂಖ್ಯೆ: (2)ರಲ್ಲಿ ನೀಡಿದ ಉತ್ತರ ಈ ಪ್ರಶ್ನೆಗಳಿಗೂ ಅನ್ವಯಿಸುತ್ತದೆ.

ಕೊಳ್ಳೇಗಾಲದಲ್ಲಿರುವ ಬಂದೀಖಾನೆ ಸ್ಥಳಾಂತರಿಸುವುದು

203 (556) ಶ್ರೀ ನರೇಂದ್ರ ಆರ್. (ಹನೂರು) ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲದಲ್ಲಿರುವ ಬಂದೀಖಾನೆಯ ಸ್ಥಳವು ಅತೀ ಚಿಕ್ಕದಾಗಿದ್ದು, ಅಲ್ಲಿ ಮೂಲಭೂತ ಸೌಲಭ್ಯಗಳೂ ಸಹ ಇಲ್ಲದಿರುವುದರಿಂದ ಅದನ್ನು ಬೇರೆಡೆಗೆ ಸ್ಥಳಾಂತರಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;